ಈ) ಪ್ರಸ್ತುತ ಸವಣೂರು ಘಟಕದಲ್ಲಿ 21 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ.

ಸೇನಾ ಭರ್ತಿಯಲ್ಲಿ ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಇಲ್ಲದೆ ಇರುವುದು

2083 (2371) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಬಂದೀಖಾನೆ, ಗೃಹರಕ್ಷಕದಳ ಮತ್ತು ಕಾನೂನು ಮಾಪನಶಾಸ್ತ್ರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೇನಾ ಭರ್ತಿಯಲ್ಲಿ ಕೇವಲ ಇಂಗ್ಲೀಷ್ ಮತ್ತು ಹಿಂದಿ ಭಾಷೆಯಲ್ಲಿ ಮಾತ್ರ ಲಿಖಿತ ಪರೀಕ್ಷೆ ಬರೆಯಬೇಕೆಂಬ ನಿಯಮದಿಂದ ಹಾಗೂ ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಇಲ್ಲದೆ ಇರುವುದರಿಂದ ಕರ್ನಾಟಕದ ಕನ್ನಡ ವಿದ್ಯಾರ್ಥಿಗಳಿಗೆ ಸೇನಾ ಭರ್ತಿಗೆ ಭಾಷೆ ಅಡ್ಡಿಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದಾಗಿ ಕರ್ನಾಟಕದ ಕನ್ನಡ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಯುನಿಯನ್ ಪಬ್ಲಿಕ್ ಸರ್ವಿಸ್ ಕಮೀಶನ್‌ನಲ್ಲಿ ಕನ್ನಡ ಭಾಷೆಯಲ್ಲಿ ಲಿಖಿತ ಪರೀಕ್ಷೆ ಬರೆಯಲು ಅವಕಾಶವಿರುವಂತೆ ಸೇನಾ ಭರ್ತಿಯಲ್ಲಿಯೂ ಕನ್ನಡ ಭಾಷೆಯಲ್ಲಿ ಲಿಖಿತ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗುವುದೆ;

ಈ) ಕೇಂದ್ರ ಸರ್ಕಾರ ಕನ್ನಡದಲ್ಲಿ ಲಿಖಿತ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಟ್ಟಲ್ಲಿ ಕರ್ನಾಟಕದ ಕನ್ನಡ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುವುದರಿಂದ ಈ ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ರಾಜ ಅಮರೇಶ್ವರ ನಾಯಕ (ಬಂದೀಖಾನೆ, ಗೃಹ ರಕ್ಷಕದಳ ಮತ್ತು ಕಾನೂನು ಮಾಪನಶಾಸ್ತ್ರ ರಾಜ್ಯ ಸಚಿವರು):

ಅ) ಬಂದಿದೆ.

ಆ) ಬಂದಿದೆ.

ಇ) ಉಪ ನಿರ್ದೇಶಕರು, ವಲಯ ಸೇನಾ ಭರ್ತಿಕಾರ್ಯಾಲಯ, ಬೆಂಗಳೂರು ಇವರು ಸೈನ್ಯ ಭರ್ತಿಗೆ ನೇಮಕಾತಿ ಪರೀಕ್ಷೆಗಳನ್ನು ಕನ್ನಡವು ಒಳಗೊಂಡಂತೆ ಪ್ರಾದೇಶಿಕ ಭಾಷೆಗಳಲ್ಲಿ ಬರೆಯಲು ಅವಕಾಶ ಕಲ್ಪಿಸುವಂತೆ ರಕ್ಷಣಾ ಮಂತ್ರಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಈ ವಿಷಯ ರಕ್ಷಣಾಗೆ ಸಂಬಂದಿಸಿದ್ದುದರಿಂದ ಸದರಿ ಪ್ರಸ್ತಾವನೆಯನ್ನು ಕಾರ್ಯಾಗತಗೊಳಿಸಲು ಸಾಧ್ಯವಿಲ್ಲ ಎಂದು ತಿಳಿಸಿರುತ್ತಾರೆ.

ಈ) ಮತ್ತೊಮ್ಮೆ ಪತ್ರ ಬರೆಯಲು ಕ್ರಮ ವಹಿಸಲಾಗುವುದು.

ಕಳೆದ ವರ್ಷಗಳಿಂದ ಕೆ.ಎಸ್.ಆರ್.ಟಿ.ಸಿ. ಗಳಿಸಿರುವ ಆದಾಯ

2084 (2374) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?